ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಉಚಿತ ಆರೋಗ್ಯ ಯೋಜನೆಗಳ ಬಗ್ಗೆ

ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

27 (58) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಸಾರ್ವಜನಿಕರಿಗಾಗಿ ಜಾರಿಯಲ್ಲಿರುವ ಉಚಿತ ಆರೋಗ್ಯ ಯೋಜನೆಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು;

(ಆ) ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಉಚಿತ ಆರೋಗ್ಯ ಯೋಜನೆಗಳನ್ನು ರಾಜ್ಯದಲ್ಲೂ ಅಳವಡಿಸಿಕೊಂಡಿದೆಯೇ;

(ಇ) ಹಾಗಿದ್ದಲ್ಲಿ, ರಾಜ್ಯ/ಕೇಂದ್ರ ಸರ್ಕಾರದ ಉಚಿತ ಆರೋಗ್ಯ ಯೋಜನೆಗಳ ಬಗ್ಗೆ ಸರ್ಕಾರ ಕಾಲ ಕಾಲಕ್ಕೆ ಹೊರಡಿಸಿರುವ ಆದೇಶಗಳು ಯಾವುವು; (ವಿವರ ನೀಡುವುದು)

(ಈ) ಸಾರ್ವಜನಿಕರಿಗಾಗಿ ಉಚಿತ ಆರೋಗ್ಯ ಯೋಜನೆಗಳನ್ನು ಯಾವ ಮಾನದಂಡವನ್ನು ಅನುಸರಿಸಿ ನೀಡಲಾಗುತ್ತಿದೆ; (ವಿವರಣೆ ನೀಡುವುದು)

(ಉ) ಉಚಿತ ಆರೋಗ್ಯ ಯೋಜನೆಯನ್ನು ಪಡೆದು ಆರೋಗ್ಯ ಕಾರ್ಡ್ ಪಡೆಯಲು ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು)